## 2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 08

## ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2005

### ಪ್ರಕರಣಗಳ ಪಟ್ಟಿ

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 2ನೇ ಪ್ರಕರಣದ ತಿದ್ದುಪಡಿ

## ಉದ್ದೇಶ ಮತ್ತು ಕಾರಣಗಳ ಹೇಳಿಕೆ

ಬೆಂಗಳೂರು ಮಹಾನಗರ ಪಾಲಿಕೆ ಪ್ರದೇಶದಿಂದ ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕನ್ನು ಬಿಟ್ಟುಬಿಡುವ ಮೂಲಕ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿಯ ಅಧಿಕಾರ ವ್ಯಾಪ್ತಿಯನ್ನು ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಿಗೆ ಸೀಮಿತಗೊಳಿಸುವ ಸಲುವಾಗಿ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985ನ್ನು ತಿದ್ದುಪಡಿಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2005ರ ವಿಧಾನಸಭೆಯ ವಿಧೇಯಕ ಸಂಖ್ಯೆ 1)

(ಭಾರತ ಸಂವಿಧಾನದ ಏಳನೇ ಅನುಸೂಚಿಯ 2ನೇ ಪಟ್ಟಿಯ ನಮೂದು 5)

## 2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 08

(2005 ರ ಮಾರ್ಚ್ ಇಪ್ಪತ್ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

# ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2005

(2005 ರ ಮಾರ್ಚ್ ಇಪ್ಪತ್ಮೂರನೇ ದಿನಾಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)

ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ;

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985 ನ್ನು (1985 ರ ಕರ್ನಾಟಕ ಅಧಿನಿಯಮ 39) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ :-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ** :- (1) ಈ ಅಧಿನಿಯಮವನ್ನು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2005 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 2 ನೇ ಪ್ರಕರಣದ ತಿದ್ದುಪಡಿ** :- ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1985 ರ 2 ನೇ ಪ್ರಕರಣದ (ಸಿ) ಖಂಡದಲ್ಲಿ "ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು" ಎಂಬ ಪದಗಳಿಗೆ "ಬೆಂಗಳೂರು ಗ್ರಾಮಾಂತರ ಜಿಲ್ಲೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ. ದಕ್ಷಿಣಾಮೂರ್ತಿ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

---

ಕರ್ನಾಟಕ ರಾಜ್ಯ ಪತ್ರದ ಭಾಗ–IVಎ ವಿಶೇಷ ಪತ್ರಿಕೆ ಸಂಖ್ಯೆ: 419 ದಿನಾಂಕ: 23.3.2005 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 10 ಶಾಸನ 2004